# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2017-18ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಶಿಕ್ಷಕರು/ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಶಿಕ್ಷಕರು/ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ 72 ಎಸ್‌ಟಿಬಿ 2016 ದಿನಾಂಕ:04.07.2016.
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: ಸಿ3(1) ಪ್ರಾ.ಶಿ.ಅ.ಶಿ.ನೇ.01/2017-18.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ:ಪಪೂಶಿ/ಆಡಳಿತ/ಎ/ಅಉನೇ/01/2017-18. ದಿನಾಂಕ:03.05.2017.

* * *

ಪ್ರಸ್ತಾವನೆ:

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ 2016-17ನೇ ಸಾಲಿಗೆ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 8,604, ಪ್ರೌಢ ಶಾಲೆಗಳಲ್ಲಿ 1,500 ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 1,130 ಅತಿಥಿ ಶಿಕ್ಷಕರನ್ನು ಹೀಗೆ ಒಟ್ಟು.11,234 ಅತಿಥಿ ಶಿಕ್ಷಕರು/ಉಪನ್ಯಾಸಕರನ್ನು ಅಧಿಸೂಚಿಸಿದ ಪ್ರಾಥಮಿಕ/ಪ್ರೌಢ/ಪದವಿ ಪೂರ್ವ ಉಪನ್ಯಾಸಕರುಗಳು ನೇಮಕಗೊಂಡು ಕರ್ತವ್ಯಕ್ಕೆ ಹಾಜರಾಗುವವರೆಗೆ ಅಥವಾ ಮಾರ್ಚ್.2017ರವರೆಗೆ ಇದರಲ್ಲಿ ಯವುದು ಮೊದಲೊ ಅಲ್ಲಿಯವರೆಗೆ ಅತಿಥಿ ಶಿಕ್ಷಕರನ್ನು ಕೆಲವೊಂದು ಷರತ್ತಿಗೊಳಪಡಿಸಿ ನೇಮಕ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿರುತ್ತದೆ.

ಮೇಲೆ ಓದಲಾದ (2) ಮತ್ತು (3)ರಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಏಕ ಕಡತದಲ್ಲಿ 2017-18ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 16,000, ಸರ್ಕಾರಿ ಪ್ರೌಢ ಶಾಲೆಗಳಿಗೆ 1,800 ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ 2,352 ಮತ್ತು ಬಿಇಡಿ ಪದವಿಗೆ ತೆರಳಿರುವ 733 ಉಪನ್ಯಾಸಕರು ಸೇರಿದಂತೆ ಒಟ್ಟು 3,085 ಉಪನ್ಯಾಸಕ ಹುದ್ದೆಗಳಿಗೆ 2017-18ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆ ಮತ್ತು ಸುಗಮವಾಗಿ ನಡೆಸಲು ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಡಿ 72 ಎಸ್‌ಟಿಬಿ 2016; ಬೆಂಗಳೂರು,**

**ದಿನಾಂಕ:13/06/2017.**

ಮೇಲೆ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ 2017-18ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 16,000, ಪ್ರೌಢ ಶಾಲೆಗಳಲ್ಲಿ 1,500, ಅತಿಥಿ ಶಿಕ್ಷಕರನ್ನು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ 2,500 ಅತಿಥಿ ಉಪನ್ಯಾಸಕರನ್ನು ಹೀಗೆ ಒಟ್ಟು 20,000 ಅತಿಥಿ ಶಿಕ್ಷಕರು/ಉಪನ್ಯಾಸಕರನ್ನು

ಅಧಿಸೂಚಿತ ಪ್ರಾಥಮಿ/ಪ್ರೌಢ/ಉಪನ್ಯಾಸಕರುಗಳು ನೇಮಕಗೊಂಡು ಕರ್ತವ್ಯಕ್ಕೆ ಹಾಜರಾಗುವವರೆಗೆ ಅಥವಾ ಮಾರ್ಚ್.2018ರವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಗೌರವ ಅತಿಥಿ ಶಿಕ್ಷಕರು/ಉಪನ್ಯಾಸಕರುಗಳನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಿ ಆಯ್ಕೆ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿದೆ.

ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ನೇಮಕ ಮಾಡಿಕೊಳ್ಳುವ ಅತಿಥಿ ಶಿಕ್ಷಕರಿಗೆ ಗೌರವ ಧನ ಪಾವತಿಸಲು ಬೇಕಾಗುವ ಜಿಲ್ಲಾವಾರು ಅನುದಾನದ ವಿವರಗಳನ್ನು ಒದಗಿಸಿದರೆ, ಲೆಕ್ಕ ಶೀರ್ಷಿಕೆ 2515-00-197-1-10-300 (Lumpsum)ರಡಿಯಲ್ಲಿ ಕಾಯ್ದಿರಿಸಿ ಕೊಂಡಿರುವ ರೂ.92.66 ಕೋಟಿಗಳ ಅನುದಾನದಿಂದ ಜಿಲ್ಲೆಗಳಿಗೆ ನೇರವಾಗಿ ಬಿಡುಗಡೆ ಮಾಡಲಾಗುವುದೆಂದು ಹಾಗೂ ಪದವಿ ಪೂರ್ವಕಾಲೇಜುಗಳ ಅತಿಥಿ ಉಪನ್ಯಾಸಕರಿಗೆ ಲೆಕ್ಕಶೀರ್ಷಿಕೆ 2202-02-109-0-13-059 ರಡಿ ಒದಗಿಸಿರುವ ರೂ.10.74 ಕೋಟಿಗಳ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಷರತ್ತುಗಳು :-

1. ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತ ಎಲ್ಲಾ ಜಿಲ್ಲೆಗಳಲ್ಲಿ ಸಮಾನವಾಗಿ ಇಲ್ಲದಿರುವುದರಿಂದ ಮತ್ತು ಕೆಲವು ಜಿಲ್ಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡುಬಂದಿರುವುದರಿಂದ ಶಿಕ್ಷಕರನ್ನು ಮರು ಹಂಚಿಕೆ ಮಾಡಲು ತುರ್ತಾಗಿ ಕ್ರಮ ಕೈಗೊಳ್ಳುವುದು;
2. ಶಿಕ್ಷಕರ ನೇಮಕಾತಿ ಹಾಗೂ ಶಾಲಾವಾರು ಹಂಚಿಕೆ ಬಗೆಗಿನ ನೀತಿಗಳನ್ನು ಇಲಾಖೆ ಸುಧಾರಿಸುವ ಕ್ರಮವಾಗಿ ( Rationalite)ಮಾಡುವುದು.
3. ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡುಬಂದಿದ್ದು, ಅವಶ್ಯಕತೆ ಇರುವ ಕಡೆ ಮರು ಹಂಚಿಕೆ ಮಾಡುವುದು.
4. ಶಿಕ್ಷಕರ ಸಂಪನ್ಮೂಲಗಳನ್ನು ಹೆಚ್ಚು ಆರ್ಥಿಕವಾಗಿ, ಹೆಚು ಪರಿಣಾಮಕಾರಿಯಾಗಿ ಬಳಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
5. ಅನುದಾನಿತ ಶಾಲೆಗಳಲ್ಲಿ ಇರುವ ಹೆಚ್ಚುವರಿ ಶಿಕ್ಷಕರನ್ನು, ಕೊರತೆ ಇರುವ ಸರ್ಕಾರಿ ಶಾಲೆಗಳಲ್ಲಿ (O.O.D) ಆಧಾರದ ಮೇಲೆಹಂಚಿಕೆ ಮಾಡುವುದು.
6. ಕೊರತೆ ಇರುವ ಶಾಲೆಗಳಿಗೆ ಹೆಚ್ಚುವರಿ ಇರುವ ಶಾಲೆಗಳಿಂದ ಶಿಕ್ಷಕರನ್ನು ಕೂಡಲೇ ಮರು ವಿನ್ಯಾಸಿಸಲು ಕ್ರಮವಹಿಸುವುದು.
7. ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರೇ ಮಾಡುವುದು. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ ಸಂಬಂಧಿಸಿದ ಉಪನಿರ್ದೇಶಕರಿಗೆ ವಹಿಸುವುದು.
8. ಪ್ರಾಥಮಿಕ ಮತ್ತು ಪ್ರೌಢ ಶಾಲಾ ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಮಾತ್ರ ನೇಮಿಸುವುದು.

9. ನೇಮಕಾತಿಗೆ ಅಧಿಸೂಚಿಸಿದ ಪ್ರಾಥಮಿಕ, ಪ್ರೌಢ ಶಿಕ್ಷಕರು ನೇಮಕಗೊಂಡು ಕರ್ತವ್ಯಕ್ಕೆ ಹಾಜರಾದ ತಕ್ಷಣ ಅತಿಥಿ ಶಿಕ್ಷಕರ ಹುದ್ದೆಗಳು ತಂತಾನೆ ರದ್ದಾಗುವುದು.
10. ಅತಿಥಿ ಶಿಕ್ಷಕರನ್ನು ಆಯಾ ಹುದ್ದೆಗೆ ನಿಗಧಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡುವುದು.
11. ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರ ಗೌರವ ಧನ ಮಾಹೆಯಾನ ರೂ.7,500/-, ಪ್ರೌಢ ಶಾಲಾ ಅತಿಥಿ ಶಿಕ್ಷಕರ ಗೌರವಧನ ಮಾಹೆಯಾನ ರೂ.8,000/- ಹಾಗೂ ಪದವಿ ಪೂರ್ವ ಕಾಲೇಜಿನ ಅತಿಥಿ ಉಪನ್ಯಾಸಕರ ಗೌರವಧನ ಮಾಹೆಯಾನ ರೂ.9,000/-ಗಳನ್ನು ನಿಗಧಿಪಡಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : ಆಇ 361 ವೆಚ್ಚ-8/2017. ದಿನಾಂಕ :26/05/2017ರಲ್ಲಿ ನೀಡಿರುವ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರೇವಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)
13/6

ಇವರಿಗೆ:

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, 18ನೇ ಕ್ರಾಸ್, ಬೆಂಗಳೂರು.
4. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ/ಕಲಬುರಗಿ.
5. ಎಲ್ಲಾ ಜಿಲ್ಲೆಗಳ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಣ ಅಧಿಕಾರಿಗಳು(ಆಯುಕ್ತರ ಮುಖಾಂತರ)
6. ನಿರ್ದೇಶಕರು,(ಪ್ರಾಥಮಿಕ/ಪ್ರೌಢ ಶಿಕ್ಷಣ)ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು/ಧಾರವಾಡ/ಕಲಬುರಗಿ.
7. ಎಲ್ಲಾ ಜಿಲ್ಲೆಗಳ ಜಿಲ್ಲಾಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳು(ಆಯುಕ್ತರ ಮುಖಾಂತರ)
8. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, (ಆಯುಕ್ತರ ಮುಖಾಂತರ)
9. ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು, ಪದವಿ ಪೂರ್ವ ಶಿಕ್ಷಣ ಇಲಾಖೆ,(ಪದವಿ ಪೂರ್ವ ನಿರ್ದೇಶನಾಲಯದ ಮೂಲಕ)
10. ಶಾಖಾ ರಕ್ಷಾ ಕಡತ / ಮಾಹಿತಿ ಕೇಂದ್ರಕ್ಕೆ(ಅಂತರ್ ಜಾಲದಲ್ಲಿ ಪ್ರಕಟಿಸಲು)/ಹೆಚ್ಚುವರಿ ಪ್ರತಿಗಳು

**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿ/ಆಡಳಿತ/ಎ/ಅಉನೇ/01/2017-18

ನಿರ್ದೇಶಕರ ಕಛೇರಿ
ಪದವಿ ಪೂರ್ವ ಶಿಕ್ಷಣ ಇಲಾಖೆ
18ನೇ ಅಡ್ಡರಸ್ತೆ, ಮಲ್ಲೇಶ್ವರಂ
ಬೆಂಗಳೂರು-560012
ದಿನಾಂಕ:20 -06-2017.

**ಜ್ಞಾಪನ**

ವಿಷಯ: 2017-18ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶದ ಸಂಖ್ಯೆ: ಇಡಿ 72 ಎಸ್‌ಟಿಬಿ 2016 ದಿನಾಂಕ 13-06-2017.

* * * *

ಸರ್ಕಾರದ ಉಲ್ಲೇಖಿತ ಆದೇಶದಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕ ಹುದ್ದೆಗಳಿಗೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ, ನೇರ ನೇಮಕಾತಿ ಮೂಲಕ ಉಪನ್ಯಾಸಕರನ್ನು ಭರ್ತಿ ಮಾಡಿಕೊಳ್ಳುವವರೆಗೆ ಅಥವಾ ಮಾರ್ಚ್ 2018 ರವರೆಗೆ ಇದರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಮಾತ್ರ ಸರ್ಕಾರವು ಆದೇಶದಲ್ಲಿ ವಿಧಿಸಿರುವ ಷರತ್ತುಗಳಿಗೆ ಒಳಪಡಿಸಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ 2500 ಅತಿಥಿ ಉಪನ್ಯಾಸಕರ ನೇಮಿಸಿಕೊಳ್ಳಲು ಸರ್ಕಾರ ಅನುಮತಿಸಿದೆ. ಅತಿಥಿ ಉಪನ್ಯಾಸಕರಿಗೆ ಪ್ರತಿ ಮಾಹೆ ರೂ.9000/-(ಒಂಭತ್ತು ಸಾವಿರ ಮಾತ್ರ) ಗಳನ್ನು ನಿಗದಿಪಡಿಸಿ ಸರ್ಕಾರವು ಆದೇಶಿಸಿದೆ. ಸರ್ಕಾರದ ಆದೇಶದ ಪ್ರತಿಯನ್ನು ಲಗತ್ತಿಸಿದೆ.

ಮುಂದುವರೆದು, 2017-18ನೇ ಸಾಲಿನಲ್ಲಿ ಬಿ.ಇಡಿ ವ್ಯಾಸಂಗಕ್ಕೆ ತೆರಳಿರುವ ಉಪನ್ಯಾಸಕರ ಸ್ಥಾನಗಳಿಗೂ ಸಹ ಅತಿಥಿ ಉಪನ್ಯಾಸಕರನ್ನು ಸರ್ಕಾರವು ಅನುಮತಿ ನೀಡಿರುವ 2500 ಉಪನ್ಯಾಸಕರ ವ್ಯಾಪ್ತಿಯೊಳಗೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಿದೆ.

ಈಗಾಗಲೇ ಈ ಕಛೇರಿಯಿಂದ ದಿನಾಂಕ 17-06-2017 ರ ಸುತ್ತೋಲೆಯಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರುಗಳಿಗೆ ನಿಗದಿತ ಕಾರ್ಯಭಾರವನ್ನು ಸರಿದೂಗಿಸುವ ಸಲುವಾಗಿ ಅಗತ್ಯ ಕಾರ್ಯಭಾರವಿರುವ ಕಾಲೇಜುಗಳಿಗೆ ಉಪನ್ಯಾಸಕರನ್ನು ನಿಯೋಜಿಸುವ ಬಗ್ಗೆ ಸೂಚಿಸಲಾಗಿದೆ. ಸದರಿ ಸುತ್ತೋಲೆಯಲ್ಲಿ ಸೂಚಿಸಿರುವಂತೆ ಅಗತ್ಯ ಕ್ರಮ ಕೈಗೊಂಡು ಇನ್ನುಳಿದ ಕೊರತೆ ಇರುವ ಸ್ಥಾನಗಳಿಗೆ ನಿಮ್ಮ ಜಿಲ್ಲೆಗೆ ಹಂಚಿಕೆಯಾಗಿರುವ ಅತಿಥಿ ಉಪನ್ಯಾಸಕರ ಸಂಖ್ಯಾಮಿತಿಯೊಳಗೆ ನೇಮಿಸಿಕೊಳ್ಳಲು ತುರ್ತು ಕ್ರಮವಹಿಸುವುದು.

ಈ ಕೆಳಗಿನ ಪಟ್ಟಿಯಲ್ಲಿ ನಿಗದಿಪಡಿಸಿದ ಸಂಖ್ಯೆಯ ಮಿತಿಯೊಳಗೆ ಉಲ್ಲೇಖಿತ ಆದೇಶದಲ್ಲಿ ನಮೂದಿಸಿರುವ ಷರತ್ತುಗಳಿಗೆ ಒಳಪಟ್ಟು ನಿಯಮಾನುಸಾರ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಜಿಲ್ಲಾ ಉಪ ನಿರ್ದೇಶಕರಿಗೆ ಸೂಚಿಸಿದೆ. ನೇಮಕಾತಿ ಮಾಡಿಕೊಂಡ ಅತಿಥಿ ಉಪನ್ಯಾಸಕರುಗಳ ವೇತನ ಬಿಡುಗಡೆಗೆ ಸಂಬಂಧಿಸಿದಂತೆ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳು ನೇಮಕಾತಿ ಮಾಡಿಕೊಂಡ ಕಾಲೇಜಿನ ಹೆಸರು, ಅತಿಥಿ ಉಪನ್ಯಾಸಕರ ಹೆಸರು ಮತ್ತು ವಿಷಯ, ಅವರಿಗೆ ದೊರಕುವ ಕಾರ್ಯಭಾರ, ಹಾಗೂ ಪ್ರತಿ ಅತಿಥಿ ಉಪನ್ಯಾಸಕರಿಗೆ 2018ರ ಮಾರ್ಚ್ ವರೆಗೆ ಲೆಕ್ಕ ಹಾಕಿ ಬಿಡುಗಡೆಮಾಡಬೇಕಾದ ಮೊತ್ತದ ವಿವರಗಳನ್ನು ತಮ್ಮ ಜಿಲ್ಲಾ ವ್ಯಾಪ್ತಿಯ ಎಲ್ಲಾ ಅತಿಥಿ ಉಪನ್ಯಾಸಕರುಗಳ ಕಾಲೇಜುವಾರು ಹಾಗೂ ಜಿಲ್ಲಾವಾರು ಕ್ರೋಢೀಕೃತ ಮಾಹಿತಿಯನ್ನು ಗೌರವ ಧನ ಬಿಡುಗಡೆ ಮಾಡುವ ಸಂಬಂಧ ದಿನಾಂಕ 31-07-2017ರ ಒಳಗೆ ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**ಜಿಲ್ಲಾವಾರು ಹಂಚಿಕೆ ಮಾಡಿದ ಅತಿಥಿ ಉಪನ್ಯಾಸಕರ ವಿವರ**

| **2017-18ನೇ ಸಾಲಿನಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮಂಜೂರು ಮಾಡಿರುವ ಅತಿಥಿ ಉಪನ್ಯಾಸಕರ ವಿವರ** | | |
|---|---|---|
| ಕ್ರ.ಸಂ | ಜಿಲ್ಲೆಗಳ ಹೆಸರು | ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ |
| 1. | ಬೆಂಗಳೂರು(ಉ) | 26 |
| 2. | ಬೆಂಗಳೂರು(ದ) | 23 |

| | | |
|---|---|---|
| 3. | ಬೆಂಗಳೂರು(ಗ್ರಾ) | 17 |
| 4. | ರಾಮನಗರ | 47 |
| 5. | ಬಳ್ಳಾರಿ | 116 |
| 6. | ಬೆಳಗಾವಿ | 170 |
| 7. | ಬಾಗಲಕೋಟೆ | 100 |
| 8. | ವಿಜಯಪುರ | 64 |
| 9. | ಬೀದರ್ | 70 |
| 10. | ದಾವಣಗೆರೆ | 58 |
| 11. | ಚಿತ್ರದುರ್ಗ | 50 |
| 12. | ಚಿಕ್ಕಮಗಳೂರು | 75 |
| 13. | ಗದಗ | 90 |
| 14. | ಹಾವೇರಿ | 60 |
| 15. | ಧಾರವಾಡ | 34 |
| 16. | ಕಲಬುರಗಿ | 117 |
| 17. | ಯಾದಗಿರಿ | 100 |
| 18. | ಹಾಸನ | 126 |
| 19. | ಕೋಲಾರ | 82 |
| 20. | ಚಿಕ್ಕಬಳ್ಳಾಪುರ | 77 |
| 21. | ಚಾಮರಾಜನಗರ | 43 |
| 22. | ಮೈಸೂರು | 113 |
| 23. | ಮಂಡ್ಯ | 91 |
| 24. | ಉತ್ತರ ಕನ್ನಡ | 85 |
| 25. | ಕೊಪ್ಪಳ | 90 |
| 26. | ರಾಯಚೂರು | 165 |
| 27. | ದಕ್ಷಿಣ ಕನ್ನಡ | 148 |
| 28. | ಉಡುಪಿ | 64 |
| 29. | ಶಿವಮೊಗ್ಗ | 60 |
| 30. | ತುಮಕೂರು | 110 |
| 31. | ಕೊಡಗು | 29 |
| ಒಟ್ಟು | | 2500 |

28/6/17

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಇವರಿಗೆ,

ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರುಗಳಿಗೆ-ಮುಂದಿನ ಕ್ರಮಕ್ಕಾಗಿ.

**ಪ್ರತಿಯನ್ನು,**

1. ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
2. ಇ-ಆಡಳಿತ ಶಾಖೆ-ಅಂತರ್ಜಾಲದಲ್ಲಿ ಪ್ರಕಟಿಸಲು.
3. ಕಚೇರಿ ಪ್ರತಿ.